Karnatak Law Society's
**Vishwanathrao Deshpande Institute of Technology**
(Approved by AICTE, New Delhi, Affiliated to VTU, Belagavi)
(Recognised Under Section 2(f) by UGC, New Delhi)
Udyog Vidya Nagar, Haliyal - 581329, Dist. Uttar Kannada (Karnataka)
Phone: 08284-220861, 220334, 221409, Fax: 08284-220813
www.klsvdit.edu.in principal@klsvdit.edu.in

Date: 09-07-2022

**ಪತ್ರಿಕಾ ಪ್ರಕಟಣೆ**

## ಬಿ.ಇ ಕಂಪ್ಯೂಟರ್ ಸೈನ್ಸ್ (ಎ.ಐ, ಎಮ್.ಎಲ್) ಕೋರ್ಸ್ ಪ್ರಾರಂಭ

ಕೆ.ಎಲ್.ಎಸ್ ವಿ.ಡಿ.ಐ.ಟಿ ಹಳಿಯಾಳದಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಕಂಪ್ಯೂಟರ್ ಸೈನ್ಸ್ (ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಮತ್ತು ಮಶಿನ್ ಲರ್ನಿಂಗ್) ಎಂಬ ಹೊಸ ಬಿ.ಇ ಕೋರ್ಸ್ ಪ್ರಾರಂಭಿಸಲಾಗಿದೆ. ಈ ಕುರಿತಂತೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ (ಎ.ಐ.ಸಿ.ಟಿ.ಇ) ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅನುಮತಿ ಈಗಾಗಲೇ ದೊರೆತಿದ್ದು ಸಿ.ಇ.ಟಿ, ಕಾಮೆಡ್-ಕೆ ಅಥವಾ ಮ್ಯಾನೇಜ್ಮೆಟ್ ಕೋಟಾದಡಿಯಲ್ಲಿ ಗರಿಷ್ಠ 60 ವಿದ್ಯಾರ್ಥಿಗಳು ಈ ಕೋರ್ಸ್‌ಗೆ ಪ್ರವೇಶ ಪಡೆದುಕೊಳ್ಳಬಹುದಾಗಿದೆ.

ಮಹಾವಿದ್ಯಾಲಯ 2004 ರಲ್ಲಿ ಪ್ರಾರಂಭಗೊಂಡಾಗ ಮೆಕ್ಯಾನಿಕಲ್, ಇಲೆಕ್ಟ್ರಿಕಲ್ ಎಂಡ್ ಇಲೆಕ್ಟ್ರಾನಿಕ್ಸ್, ಇಲೆಕ್ಟ್ರಾನಿಕ್ಸ್ ಎಂಡ್ ಕಮ್ಯುನಿಕೇಶನ್ ಮತ್ತು ಕಂಪ್ಯೂಟರ್ ಸೈನ್ಸ್ ವಿಭಾಗಗಳಲ್ಲಿ ಬಿ.ಇ ಕೋರ್ಸ್ ಹೊಂದಿತ್ತು. 2010 ರಲ್ಲಿ ಸಿವಿಲ್ ಇಂಜನಿಯರಿಂಗ್ ವಿಭಾಗ ಸೇರ್ಪಡೆಗೊಳಿಸಲಾಯಿತು. ಅಂತೆಯೇ ಪ್ರಸಕ್ತ ವರ್ಷ 2022 ರಲ್ಲಿ ಕಂಪ್ಯೂಟರ್ ಸೈನ್ಸ್ (ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಮತ್ತು ಮಶಿನ್ ಲರ್ನಿಂಗ್) ವಿಭಾಗ ಸೇರ್ಪಡೆಗೊಂಡಿದ್ದು ಮಹಾವಿದ್ಯಾಲಯದ ಸಾಧನೆಯ ಒಂದು ಪ್ರಮುಖ ಮೈಲುಗಲ್ಲಾಗಿದೆ.

ಇತ್ತೀಚೆಗೆ ಎಲ್ಲ ಕ್ಷೇತ್ರಗಳಲ್ಲಿ ಸಾಫ್ಟವೇರ್ ಅಥವಾ ಮಾಹಿತಿ ತಂತ್ರಜ್ಞಾನ ಬಳಕೆಯಾಗುತ್ತಿರುವುದರಿಂದ ಸಾಫ್ಟವೇರ್ ಕ್ಷೇತ್ರದಲ್ಲಿ ವಿಪುಲ ಉದ್ಯೋಗಾವಕಾಶ ಸೃಷ್ಟಿಯಾಗಿದೆ. ಕೃತಕ ಬುದ್ಧಿಮತ್ತೆ ಮತ್ತು ಮಶಿನ್ ಲರ್ನಿಂಗ್ ಎಂಬ ಹೊಸ ತಂತ್ರಜ್ಞಾನಗಳು ಸಾಫ್ಟ್ವೇರ್ ಕ್ಷೇತ್ರದಲ್ಲಿ ಬಳಕೆಯಾಗುತ್ತಿದ್ದು ವಿದ್ಯಾರ್ಥಿಗಳು ಈ ಕ್ಷೇತ್ರದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದಾಗಿದೆ. ಕೈಗಾರಿಕೆಗಳಲ್ಲಿ ಬದಲಾವಣೆಗಳಾಗ ತಾಂತ್ರಿಕ ಶಿಕ್ಷಣದಲ್ಲಿ ಸುಧಾರಣೆ ತರುವುದು ಮತ್ತು ಹೊಸ ವಿಷಯಗಳನ್ನು ಸೇರಿಸುವುದು ಅಗತ್ಯವಾಗಿದೆ. ಈ ನಿಟ್ಟಿನಲ್ಲಿ ಮಹಾವಿದ್ಯಾಲಯ ಕಾಲ ಕಾಲಕ್ಕೆ ಹೊಸ ತಾಂತ್ರಿಕ ವಿಭಾಗಗಳನ್ನು ಪ್ರಾರಂಭಿಸುತ್ತ ಬಂದಿದೆ ಎಂದು ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ ತಮ್ಮ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology
Haliyal - 581 329 (U.K.)

